# ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ: ಕೃಷಿ ಆಯುಕ್ತರ ಕಛೇರಿಗೆ ಗಣಕ ಯಂತ್ರ ಖರೀದಿಸಲು ಆಡಳಿತಾತ್ಮಕ ಅನುಮೋದನೆ ನೀಡುವ ಬಗ್ಗೆ..

ಓದಲಾಗಿದೆ: 1. ಸರ್ಕಾರಿ ಆದೇಶಗಳ ಸಂಖ್ಯೆ: ಸಿಆಸುಇ 50 ಇಆಇ 2019 ದಿನಾಂಕ 06.09.2019 ಮತ್ತು ಸಂಖ್ಯೆ: ಸಿಆಸುಇ 50 ಇಆಇ 2019 ದಿನಾಂಕ 06.09.2019.

2. ಅಧಿಸೂಚನೆ ಸಂಖ್ಯೆ: ಆಇ 945 ವೆಚ್ಚ-12/18 ದಿನಾಂಕ 11.10.2018.

3. ಕೃಷಿ ಆಯುಕ್ತರವರ ಪ್ರಸ್ತಾವನೆ ಸಂಖ್ಯೆ: ಗಯವಿ/ಸ.ಕಾ.ದ/ಐಟಿ ಅಳವಡಿಕೆ/ಸಭೆ/2019-20 ದಿನಾಂಕ 27.09.2019.

ಪ್ರಸ್ತಾವನೆ:

ಮೇಲೆ ಓದಲಾದ (1)ರ ಸರ್ಕಾರಿ ಆದೇಶದಲ್ಲಿ, ರಾಜ್ಯದ ಸರ್ಕಾರಿ ಕಛೇರಿಗಳಲ್ಲಿ ಗಣಕೀಕರಣಕ್ಕಾಗಿ ಅವಶ್ಯವಿರುವ ಗಣಕ ಯಂತ್ರ ಹಾಗೂ ಅದಕ್ಕೆ ಸಂಬಂಧಿತ ಉಪಕರಣಗಳನ್ನು ಪೂರೈಸಲು ಅನುಬಂಧದಲ್ಲಿ ಲಗತ್ತಿಸಿರುವ ಮಾರಾಟಗಾರರ ಪಟ್ಟಿಯನ್ನು ದಿನಾಂಕ 30.09.2021 ರವರೆಗೆ ಸಿಂಧುತ್ವವಿರುವಂತೆ ಅನುಮೋದನೆ ನೀಡಿದೆ. ಮುಂದುವರೆದು, ವಿವಿಧ ಇಲಾಖೆಗಳು ತಮ್ಮ ಇಲಾಖಾ ತಾಂತ್ರಿಕ ಸಲಹಾ ಸಮಿತಿಯ ಅನುಮೋದನೆ ಇಲ್ಲದೆ ತಮಗೆ ಸೂಕ್ತವಾಗುವ ವಿಶಿಷ್ಟತೆಯನ್ನು (Technical Specification) ಆಯ್ಕೆ ಮಾಡಿಕೊಂಡು, ಪ್ರತಿ ಟೆಂಡರ್ ಗೆ ರೂ.25.00 ಲಕ್ಷಗಳ ಮೊತ್ತ ಮೀರದಂತೆ ಆಯಾ ಆಡಳಿತ ಇಲಾಖೆಯ ಮುಖ್ಯಸ್ಥರ ಆಡಳಿತಾತ್ಮಕ ಅನುಮೋದನೆ ಪಡೆದು ಖರೀದಿಸಲು ಸಹಮತಿ ನೀಡಿದೆ.

ಮೇಲೆ ಓದಲಾದ (2)ರ ಅಧಿಸೂಚನೆಯಲ್ಲಿ, ಸರ್ಕಾರದ ಇಲಾಖೆಗಳು, ಸ್ವಾಯತ್ತ ಸಂಸ್ಥೆಗಳು, ನಿಗಮ ಹಾಗೂ ಮಂಡಳಿಗಳಿಗೆ ಕಂಪ್ಯೂಟರ್ ಸಂಬಂಧಿತ ಸೇವೆಗಳನ್ನು ಕರ್ನಾಟಕ ಸರ್ಕಾರದ ಅಂಗ ಸಂಸ್ಥೆಯಾದ ಮೆ: ಕರ್ನಾಟಕ ರಾಜ್ಯ ವಿದ್ಯುನ್ಮಾನ ಅಭಿವೃದ್ಧಿ ನಿಗಮ ನಿಯಮಿತ (KEONICS) ರವರಿಂದ ಕೆಲವು ಷರತ್ತಿಗೊಳಪಟ್ಟು ಒಂದು ವರ್ಷದ ಅವಧಿಗೆ ಪಡೆಯಲು KTPP ಅಧಿನಿಯಮ 1999ರ ಕಲಂ 4(ಜಿ) ರಡಿ ಪ್ರದತ್ತವಾದ ಅಧಿಕಾರ ಚಲಾಯಿಸಿ ಪಾರದರ್ಶಕತೆ ಕಾಯ್ದೆಯಿಂದ ವಿನಾಯಿತಿ ನೀಡಿದೆ.

ಮೇಲೆ ಓದಲಾದ (3)ರ ಕೃಷಿ ಆಯುಕ್ತರವರ ಪ್ರಸ್ತಾವನೆಯಲ್ಲಿ, ಕೃಷಿ ಇಲಾಖೆಯ ಕಾರ್ಯಕ್ರಮಗಳ ಅನುಷ್ಠಾನವನ್ನು ಗಣಕೀರಣಗೊಳಿಸಲು ಇ-ಆಡಳಿತ ಇಲಾಖೆಯ ವತಿಯಿಂದ ಹೊರಡಿಸಲಾಗಿರುವ **ಸರ್ಕಾರದ ಆದೇಶ ಸಂಖ್ಯೆ: ಸಿಆಸುಇ 50 ಇಆಇ 2019 ದಿನಾಂಕ 06.09.2019** (ಮಾರಾಟಗಾರರ ಪಟ್ಟಿ) ಹಾಗೂ **ಸರ್ಕಾರಿ ಆದೇಶ ಸಂಖ್ಯೆ: ಸಿಆಸುಇ 50 ಇಆಇ 2019 ದಿನಾಂಕ 06.09.2019** (Technical Specification) ಗಳನ್ವಯ ಇಲಾಖೆಗೆ ಅವಶ್ಯವಿರುವ ಗಣಕ ಯಂತ್ರ ಹಾಗೂ ಪೂರಕ ಸಾಮಾಗ್ರಿ ಖರೀದಿಗೆ KTPP ಅಧಿನಿಯಮ 1999ರ ಕಲಂ 4(ಜಿ) ರಡಿ ವಿನಾಯಿತಿ

..2)

ಹೊಂದಿರುವ KEONICS ಸಂಸ್ಥೆಯ ಮೂಲಕ ಗಣಕ ಯಂತ್ರ ಮತ್ತು ಪೂರಕ ಸಾಮಾಗ್ರಿಗಳನ್ನು ಕೇಂದ್ರ ಕಛೇರಿಯಿಂದ ಖರೀದಿಸಲು ಹಾಗೂ ಸದರಿ ವೆಚ್ಚವನ್ನು ಕೃಷಿ ಕರ್ಮಣ್ ಪ್ರಶಸ್ತಿಯ ನಗದು ಬಹುಮಾನದ ಮೊತ್ತಕ್ಕೆ ಜಮೆಯಾಗಿರುವ ಬಡ್ಡಿ ಮೊತ್ತದ ಅನುದಾನ ರೂ.25.00 ಲಕ್ಷದಿಂದ ವೆಚ್ಚ ಭರಿಸಲು ಆಡಳಿತಾತ್ಮಕ ಅನುಮೋದನೆ ನೀಡಿ, ಸರ್ಕಾರಿ ಆದೇಶ ಹೊರಡಿಸುವಂತೆ ಕೋರಿರುತ್ತಾರೆ, ಮುಂದುವರೆದು, ಜಿಲ್ಲಾ ಜಂಟಿ ಕೃಷಿ ನಿರ್ದೇಶಕರು, ವಿಭಾಗೀಯ ಉಪ ಕೃಷಿ ನಿರ್ದೇಶಕರು ಹಾಗೂ ತಾಲ್ಲೂಕು ಸಹಾಯಕ ಕೃಷಿ ನಿರ್ದೇಶಕರುಗಳಿಗೆ ಅವರುಗಳಿಗೆ ನೀಡಿರುವ ಸಾಮಾನ್ಯ ವಿತ್ತಾಧಿಕಾರದ ಪರಿಮಿತಿಯಲ್ಲಿ ವಿವಿಧ ಯೋಜನೆಗಳಡಿ ಗಣಕ ಯಂತ್ರ ಹಾಗೂ ಸಂಬಂಧಿತ ಉಪಕರಣಗಳ ಖರೀದಿಗೆ ಸರ್ಕಾರದ ಆಡಳಿತಾತ್ಮಕ ಅನುಮತಿ ಕೋರಿರುತ್ತಾರೆ.

ಕೃಷಿ ಆಯುಕ್ತರ ಪ್ರಸ್ತಾವನೆಯನ್ನು ಕೂಲಂಕಷವಾಗಿ ಪರಿಶೀಲಿಸಿ, ಸಧ್ಯಕ್ಕೆ ಕೃಷಿ ಆಯುಕ್ತಾಲಯಕ್ಕೆ ಅಗತ್ಯವಿರುವ ಗಣಕ ಯಂತ್ರಗಳ ಖರೀದಿಗೆ ಮಾತ್ರ ಅನುಮತಿ ನೀಡಲು ತೀರ್ಮಾನಿಸಿ ಸರ್ಕಾರವು ಈ ಕೆಳಕಂಡಂತೆ ಆದೇಶಿಸಿದೆ.

**ಆದೇಶ ಸಂಖ್ಯೆ: AGRI.-ASC/48/2019 ಬೆಂಗಳೂರು, ದಿನಾಂಕ 10.10.2019**

ಪ್ರಸ್ತಾವನೆಯಲ್ಲಿ ವಿವರಿಸಿರುವ ಕಾರಣಗಳ ಹಿನ್ನಲೆಯಲ್ಲಿ, ಕೃಷಿ ಆಯುಕ್ತಾಲಯಕ್ಕೆ ಗಣಕ ಯಂತ್ರಗಳನ್ನು ಖರೀದಿಸಲು ಕೆ.ಟಿ.ಪಿ.ಪಿ. ನಿಯಮ 4(ಜಿ) ರಡಿ ವಿನಾಯಿತಿ ಹೊಂದಿರುವ KEONICS ಸಂಸ್ಥೆಯ ಮೂಲಕ ಗಣಕ ಯಂತ್ರ ಮತ್ತು ಸಂಬಂಧಿತ ಉಪಕರಣಗಳನ್ನು ಕೇಂದ್ರ ಕಛೇರಿಯಿಂದ ಖರೀದಿಸಲು ಹಾಗೂ ಸದರಿ ಗಣಕ ಯಂತ್ರಗಳ ಖರೀದಿಗೆ ತಗಲುವ ವೆಚ್ಚವನ್ನು ಕೃಷಿ ಕರ್ಮಣ್ ಪ್ರಶಸ್ತಿಯ ನಗದು ಬಹುಮಾನದ ಮೊತ್ತಕ್ಕೆ ಜಮೆಯಾಗಿರುವ ಬಡ್ಡಿ ಮೊತ್ತದಿಂದ ರೂ.25.00 ಲಕ್ಷ (ಇಪ್ಪತ್ತೈದು ಲಕ್ಷ ರೂಪಾಯಿಗಳು ಮಾತ್ರ) ಗಳ ಮಿತಿಗೊಳಪಟ್ಟು ಖರೀದಿಸಲು ಸರ್ಕಾರದ ಆಡಳಿತಾತ್ಮಕ ಅನುಮೋದನೆ ನೀಡಲಾಗಿದೆ.

ಕರ್ನಾಟಕ ರಾಜ್ಯಪಾಲರ ಅಜ್ಞಾನುಸಾರ
ಹಾಗೂ ಅವರ ಹೆಸರಿನಲ್ಲಿ

BS Nagaratnamma

(ಬಿ.ಎಸ್. ನಾಗರತ್ನಮ್ಮ)
ಸರ್ಕಾರದ ಅಧೀನ ಕಾರ್ಯದರ್ಶಿ
ಕೃಷಿ ಇಲಾಖೆ (ಯೋಜನೆ)
10/10/2019

ಇವರಿಗೆ:-

1. ಪ್ರಧಾನ ಮಹಾಲೇಖಪಾಲರು (ಜಿ&ಎಸ್‌ಎಸ್‌ಎ), ಕರ್ನಾಟಕ, ಹೊಸ ಕಟ್ಟಡ, ಆಡಿಟ್ ಭವನ, ಬೆಂಗಳೂರು-1.

..3)

2. ಪ್ರಧಾನ ಮಹಾಲೇಖಪಾಲರು (ಇ&ಆರ್‌ಎಸ್‌ಎ), ಕರ್ನಾಟಕ, ಹೊಸ ಕಟ್ಟಡ, ಆಡಿಟ್ ಭವನ, ಬೆಂಗಳೂರು-1
3. ಪ್ರಧಾನ ಮಹಾಲೇಖಪಾಲರು (ಎ&ಇ), ಕರ್ನಾಟಕ ಪಾರ್ಕ್‌ಹೌಸ್ ರಸ್ತೆ, ಬೆಂಗಳೂರು
4. ಆಯುಕ್ತರು / ನಿರ್ದೇಶಕರು, ಕೃಷಿ ಇಲಾಖೆ, ಬೆಂಗಳೂರು
5. ನಿರ್ದೇಶಕರು, ಟಿ.ಎನ್.ಎಂ.ಸಿ. ಖನಿಜ ಭವನ, ಬೆಂಗಳೂರು
6. ಸರ್ಕಾರದ ಉಪ ಕಾರ್ಯದರ್ಶಿ-1, ಆರ್ಥಿಕ ಇಲಾಖೆ, ವಿಧಾನ ಸೌಧ, ಬೆಂಗಳೂರು
7. ನಿರ್ದೇಶಕರು, ಖಜಾನೆ ಇಲಾಖೆ, ವಿಶ್ವೇಶ್ವರಯ್ಯ ಕೇಂದ್ರ, ಬೆಂಗಳೂರು
   ಆಂತರಿಕ ಆರ್ಥಿಕ ಸಲಹೆಗಾರರು, ಕೃಷಿ ಇಲಾಖೆ, ಬೆಂಗಳೂರು
8. ಸರ್ಕಾರದ ಅಧೀನ ಕಾರ್ಯದರ್ಶಿ, ಆರ್ಥಿಕ ಇಲಾಖೆ, ವೆಚ್ಚ-4 ವಿಧಾನ ಸೌಧ, ಬೆಂಗಳೂರು
9. ಸರ್ಕಾರದ ಕಾರ್ಯದರ್ಶಿಗಳ ಆಪ್ತ ಕಾರ್ಯದರ್ಶಿಗಳು, ಕೃಷಿ ಇಲಾಖೆ, ಬೆಂಗಳೂರು
10. ಸರ್ಕಾರದ ಉಪ ಕಾರ್ಯದರ್ಶಿಗಳು, ಕೃಷಿ ಇಲಾಖೆ ಇವರ ಆಪ್ತ ಶಾಖೆ
11. ಶಾಖಾ ರಕ್ಷ ಕಡತ / ಹೆಚ್ಚುವರಿ ಪ್ರತಿಗಳು.